ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE: 10/3/21

# ತಮಿಳ್ನಾಡು ಕಾವೇರಿ ಕ್ಯಾತೆ ಬಗ್ಗೆ ಸರ್ವಪಕ್ಷ ಸಭೆ

## ದಕ್ಷಿಣ ವೆಲ್ಲಾರ್ ಯೋಜನೆ ಕಾನೂನುಬಾಹಿರ । ಕೇಂದ್ರಕ್ಕೆ ಆಕ್ಷೇಪಣೆ: ಡಿಸಿಎಂ ಕಾರಜೋಳ

• **ಕನ್ನಡಪ್ರಭ ವಾರ್ತೆ** ವಿಧಾನ ಪರಿಷತ್ 10/3/21

ತಮಿಳುನಾಡು ಸರ್ಕಾರವು ಕಾವೇರಿ ನದಿ ಪಾತ್ರದಲ್ಲಿ ಹೆಚ್ಚುವರಿ ನೀರನ್ನು ಬಳಸಿಕೊಳ್ಳಲು ಕೈಗೆತ್ತಿಕೊಂಡಿರುವ ಕಾವೇರಿ- ದಕ್ಷಿಣ ವೆಲ್ಲಾರ್ ಯೋಜನೆಯ ಬಗ್ಗೆ ಚರ್ಚಿಸಲು ಸರ್ವಪಕ್ಷ ಸಭೆ ಕರೆಯುವುದಾಗಿ ಉಪಮುಖ್ಯಮಂತ್ರಿ ಗೋವಿಂದಕಾರಜೋಳ ವಿಧಾನಪರಿಷತ್‌ನಲ್ಲಿ ಪ್ರಕಟಿಸಿದ್ದಾರೆ.



ತಮಿಳುನಾಡು ಕಾವೇರಿ ನದಿ ಪಾತ್ರದಲ್ಲಿ ಅಕ್ರಮವಾಗಿ ನೀರಾವರಿ ಯೋಜನೆಗಳನ್ನು ಕೈಗೆತ್ತಿಕೊಳ್ಳುತ್ತಿರುವ ಕುರಿತು ನಿಯಮ 68ರಡಿಯಲ್ಲಿ ನಡೆದ ಚರ್ಚೆಗೆ ಕಾರಜೋಳ ಉತ್ತರಿಸಿದರು. ಕಾನೂನುಬಾಹಿರವಾಗಿರುವ ಈ ಯೋಜನೆಗೆ ಕೇಂದ್ರ ಸರ್ಕಾರ ಅನುಮತಿ, ಅನುದಾನ ನೀಡಬಾರದು ಮತ್ತು ರಾಷ್ಟ್ರೀಯ ಯೋಜನೆ ಎಂದು ಘೋಷಿಸಬಾರದು ಎಂದು ಪ್ರಧಾನ ಮಂತ್ರಿಗಳಿಗೆ, ಕೇಂದ್ರ ಜಲ ಸಂಪನ್ಮೂಲ ಸಚಿವಾಲಯ, ಕೇಂದ್ರ ಜಲ ಆಯೋಗಹಾಗೂಕಾವೇರಿ ಜಲನಿರ್ವಹಣಾಪ್ರಾಧಿಕಾರಕ್ಕೆ ಈಗಾಗಲೇ ಆಕ್ಷೇಪಣೆ ಸಲ್ಲಿಸಲಾಗಿದೆ ಎಂದು ಸದನಕ್ಕೆ ತಿಳಿಸಿದರು.

ಈ ಯೋಜನೆಗೆ ಕೇಂದ್ರ ಸರ್ಕಾರ ಅನುದಾನ ನೀಡಿಲ್ಲ. ಈ ಯೋಜನೆಯ ಕಾರ್ಯಕ್ರಮದಲ್ಲಿ ಪ್ರಧಾನಿಗಳು ಭಾಗವಹಿಸುತ್ತಾರೆ ಎಂಬುದು ತಪ್ಪು ವರದಿ. ನಾವು ಈ ಯೋಜನೆಗೆ ತಡೆ ನೀಡಲು ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ ಚರ್ಚೆ ನಡೆಸಿದ್ದೇವೆ. ಕೇಂದ್ರ ಸರ್ಕಾರದೊಂದಿಗೆ ಪತ್ರ ವ್ಯವಹಾರ ನಡೆಸಿದ್ದೇವೆ. ರಾಜ್ಯದ ಹಿತದ ಪ್ರಶ್ನೆ ಬಂದಾಗ ನಮ್ಮ ಸರ್ಕಾರ ಯಾವ ಕಾರಣಕ್ಕೂ ಯಾರೊಂದಿಗೂ ರಾಜಿ ಆಗುವುದಿಲ್ಲ ಎಂದು ಕಾರಜೋಳ ಭರವಸೆ ನೀಡಿದರು.

ತಮಿಳುನಾಡು ಸರ್ಕಾರವು ರಾಷ್ಟ್ರೀಯ ಜಲ ಅಭಿವೃದ್ಧಿ ಸಂಸ್ಥೆ ಯೋಜಿಸಿರುವ ಕಾವೇರಿ-ವೈಗೈ-ಗುಂಡಾರ್ ನದಿ ಜೋಡಣೆ ಯೋಜನೆಯ ಕಾಮಗಾರಿಗಳನ್ನು ಮುಂಚಿತವಾಗಿ ಕೈಗೊಳ್ಳಲು 6,941 ಕೋಟಿ ರು.ಗಳಿಗೆ ಅನುಮೋದನೆ ನೀಡಿದೆ. ಈ ಯೋಜನೆಗೆ ಸಮಯ ತಗಲುವುದರಿಂದ ಅಲ್ಲಿಯವರೆಗೆ ಮೆಟ್ಟೂರು ಜಲಾಶಯದಿಂದ 8.6 ಟಿಎಂಸಿ ನೀರು ಬಳಸಿಕೊಳ್ಳಲು ತಮಿಳುನಾಡು ಮುಂದಾಗಿದೆ. ಕಾವೇರಿ ಕಣಿವೆಯಲ್ಲಿ ಸಿಗುವ ಹೆಚ್ಚುವರಿ ನೀರನ್ನು ಬಳಸಿಕೊಳ್ಳುವ ಈ ದಕ್ಷಿಣ ವೆಲ್ಲಾರ್ ಲಿಂಕ್ ಯೋಜನೆಗೆ ತಾತ್ವಿಕ ಅನುಮೋದನೆ ನೀಡಬೇಕು ಹಾಗೂ ಕಾವೇರಿ-ವೈಗೈ-ಗುಂಡಾರ್ ನದಿ ಜೋಡಣೆಯನ್ನು ರಾಷ್ಟ್ರೀಯಯೋಜನೆಯೆಂದುಘೋಷಿಸುವಂತೆ ಅದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ. ಈ ಬಗ್ಗೆ ಕೇಂದ್ರ ಜಲ ಶಕ್ತಿ ಸಚಿವಾಲಯವು ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರ (ಸಿಡಬ್ಲುಎಂಎ)ದ ಅಭಿಪ್ರಾಯ ಕೋರಿದೆ. ಸಿಡಬ್ಲುಎಂಎ ರಾಜ್ಯದ ಅಭಿಪ್ರಾಯವನ್ನು ಕೇಳಿದೆ ಎಂದು ಕಾರಜೋಳ ಸದನಕ್ಕೆ ತಿಳಿಸಿದರು.

ಕಾರಜೋಳ ಅವರ ಉತ್ತರ ಪ್ರತಿಪಕ್ಷಗಳಿಗೆ ತೃಪ್ತಿ ತರಲಿಲ್ಲ. ಈ ಯೋಜನೆಯನ್ನು ವಿರೋಧಿಸಿ ಪ್ರಧಾನಿಗಳಿಗೆ ಪತ್ರ ಬರೆದಿಲ್ಲ, ಪ್ರಧಾನಿ ಅವರನ್ನು ಭೇಟಿಯೂ ಆಗಿಲ್ಲ, ನ್ಯಾಯಾಲಯದಲ್ಲಿಯೂ ದೂರು ದಾಖಲಿಸಿಲ್ಲ ಎಂದು ಪ್ರತಿಪಕ್ಷಗಳು ಸಭಾತ್ಯಾಗ ಮಾಡಿದವು. ಎಸ್.ಆರ್. ಪಾಟೀಲ್, ಸಿ.ಎಂ.ಲಿಂಗಪ್ಪ, ಎಂ. ನಾರಾಯಣಸ್ವಾಮಿ, ಜೆಡಿಎಸ್‌ನ ಶ್ರೀಕಂಠೇಗೌಡ, ಮರಿತಿಬ್ಬೇಗೌಡ, ತಿಪ್ಪೇಸ್ವಾಮಿ ಯೋಜನೆ ಬಗ್ಗೆ ತಮ್ಮ ಆತಂಕವನ್ನು ವ್ಯಕ್ತಪಡಿಸಿದರು.